ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 14ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) **ವರ್ಗಾವಣೆಗೊಂಡ ಪ್ರಶ್ನೆ:-**

ದಿನಾಂಕ: 13.12.2021ರ 1ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಬೆಳ್ಳಿ ಪ್ರಕಾಶ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 15(214) : ಮಾನ್ಯ ಜಲಸಂಪನ್ಮೂಲ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಈ ಕೆಳಕಂಡ ವರದಿಗಳನ್ನೊಪ್ಪಿಸುವುದು.

1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ 2014-15, 2016-17, 2017-18 ಮತ್ತು 2018-19ನೇ ಸಾಲಿನ ವರದಿಗಳಲ್ಲಿನ ಕಂಡಿಕೆಗಳ ಮೇಲಣ 2020-21ನೇ ಸಾಲಿನ ಸಮಿತಿಯ ಶಿಫಾರಸ್ಸುಗಳನ್ನೊಳಗೊಂಡ ಐದನೇ ವರದಿ
2. 2016-17ನೇ ಸಾಲಿನ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಸಾಮಾನ್ಯ ಮತ್ತು ಸಾಮಾಜಿಕ ವಲಯ) ವರದಿಯಲ್ಲಿನ "ಬೋಧನಾ ಸಿಬ್ಬಂದಿ ನೇಮಕಾತಿ, ಪದೋನ್ನತಿ ಹಾಗೂ ವೇತನ ನಿಗದಿಯ ವಿಷಯಾಧಾರಿತ ಲೆಕ್ಕಪರಿಶೋಧನೆ ಬಗ್ಗೆ 2020-21ನೇ ಸಾಲಿನ ಸಮಿತಿಯ ಶಿಫಾರಸ್ಸುಗಳನ್ನೊಳಗೊಂಡ ಆರನೇ ವರದಿ
3. ಹೇಮಾವತಿ/ಯಗಚಿ/ವಾಟೆಹೊಳೆ ಜಲಾಶಯ ಯೋಜನೆಗಳ ಭೂ ಸಂತ್ರಸ್ಥರಿಗೆ ಮೀಸಲಿರಿಸಲಾದ ಸರ್ಕಾರಿ ಜಮೀನುಗಳನ್ನು ಅಕ್ರಮವಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಭೂ ಸಂತ್ರಸ್ಥರಲ್ಲದವರಿಗೆ ಭೂ ಮಂಜೂರು ಮಾಡಿರುವ ಕುರಿತಂತೆ 2020-21ನೇ ಸಾಲಿನ ಸಮಿತಿಯ ಮಧ್ಯಂತರ ವರದಿ (ಏಳನೇ ವರದಿ) ಗಳನ್ನೊಪ್ಪಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2020-21ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸಿನ ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

4. ಚುನಾವಣಾ ಪ್ರಸ್ತಾವ

ಶ್ರೀ ಜೆ.ಸಿ. ಮಾಧುಸ್ವಾಮಿ, (ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) **ಅವರು:-**

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 21(1)(vii) ರ ಅನ್ವಯ ವರ್ಗಾಯಿಸಬಹುದಾದ ಒಂಟಿ ಮತದ ಮೂಲಕ ದಾಮಾಷಾ ಪ್ರಾತಿನಿಧ್ಯದ ತತ್ವದ ಆಧಾರದ ಮೇಲೆ ಈ ಸಭೆಯು **ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಮೂರು ಜನ ಸದಸ್ಯರನ್ನು ಚುನಾಯಿಸಬೇಕೆಂದು** ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ** ಸಿದ್ದರಾಮಯ್ಯ, ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 3/ ..

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಟಿ.ಡಿ. ರಾಜೇಗೌಡ ಅವರು** – ಅಟಲ್‌ಜೀ ಕೇಂದ್ರಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸರ್ವೆ ಇಲಾಖೆಯ ಬಾಂದು ಜವಾನರುಗಳಿಗೆ ವೇತನ ಪಾವತಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ದೊಂಬರ ಹಳ್ಳಿ ಗ್ರಾಮದಲ್ಲಿ ಸರ್ಕಾರಿ ಜಮೀನಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸರ್ಕಾರಕ್ಕೆ ನಷ್ಟವನ್ನುಂಟು ಮಾಡಲು ಪ್ರಯತ್ನಿಸಿರುವ ಅಂದಿನ ತಹಶೀಲ್ದಾರ್ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್. ಅವರು** – ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮಗಳ ಹತ್ತಿರ ರೈಲ್ವೆ ಅಂಡರ್ ಪಾಸ್‌ನಲ್ಲಿ ಮಳೆಗಾಲದಲ್ಲಿ ನೀರು ತುಂಬಿಕೊಳ್ಳುವುದರಿಂದ ಸ್ಥಳೀಯರು ತೊಂದರೆಗಳನ್ನು ಅನುಭವಿಸುತ್ತಿದ್ದು, ರೈಲ್ವೆ ಅಂಡರ್ ಪಾಸ್‌ಗಳನ್ನು ದುರಸ್ತಿಗೊಳಿಸುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಸ್. ರಾಮಪ್ಪ ಅವರು** – ಹರಿಹರ ವಿಧಾನಸಭಾ ಕ್ಷೇತ್ರದ ಹರಿಹರ ನಗರದಲ್ಲಿ ಪಶು ಆಸ್ಪತ್ರೆ ನಿರ್ಮಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

5) **ಶ್ರೀ ಉಮಾನಾಥ್ ಎ. ಕೋಟ್ಯಾನ್ ಅವರು** – ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಗೆ ನಿರಾಪೇಕ್ಷಣಾ ಪತ್ರವನ್ನು ನೀಡಲು ಆದೇಶವನ್ನು ಹೊರಡಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ. ಮಹದೇವ್ ಅವರು** – ಪಿರಿಯಾಪಟ್ಟಣ ಮತಕ್ಷೇತ್ರದಲ್ಲಿ ಖಾಲಿಯಿರುವ ಪಶು ವೈದ್ಯರು ಹಾಗೂ ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರು ಗ್ರೇಡ್–2 ಮತ್ತು ಜಂಟಿ ನಿರ್ದೇಶಕರುಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಣೆಗೊಳಿಸಿ ಪ್ರಕಟಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರ ಗಮನ ಸೆಳೆಯುವುದು.

... 4/ ..

8) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ಮದ್ದೂರು ಪಟ್ಟಣ ಪರಿಮಿತಿಯಲ್ಲಿ ಮೂಲಸೌಕರ್ಯಗಳನ್ನು ಒದಗಿಸುವ ಕಾಮಗಾರಿಗಳಿಗೆ ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಿ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ಅವರು** – ದೇವರಹಿಪ್ಪರಗಿಯಿಂದ ಹೂವಿನಹಿಪ್ಪರಗಿ, ಮುದ್ದೇಬಿಹಾಳ, ನಾಲತವಾಡ, ನಾರಾಯಣಪುರ, ಲಿಂಗಸಗೂರುವರೆಗೆ ಫೇಸ್–3 ಕೆಶಿಪಿ–4 ಅಡಿಯಲ್ಲಿ ಸೇರ್ಪಡೆ ಮಾಡಿ ಎಸ್.ಹೆಚ್.41 ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು** – ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನಂಜನಗೂಡು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಯು.ಜಿ.ಡಿ. ಕಾಮಗಾರಿಗಳು ಅಪೂರ್ಣಗೊಂಡಿರುವುದರಿಂದ ಸಾರ್ವಜನಿಕರಿಗೆ ಉಂಟಾಗಿರುವ ಸಮಸ್ಯೆಯ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಅನಿಲ್ ಎಸ್. ಬೆನಕೆ ಅವರು** – ಕೋವಿಡ್ ಸಂದರ್ಭದಲ್ಲಿ ಅವ್ಯವಸ್ಥೆಗಳ ಆಗರವಾಗಿದ್ದ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸುಧಾರಣೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಎತ್ತಿನಹೊಳೆ ಯೋಜನೆಯ ಉಗಮ ಸ್ಥಾನವಾಗಿರುವ ಹಾಸನ ಜಿಲ್ಲೆ ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ವಿಶೇಷ ಘಟಕ ಯೋಜನೆಯಡಿ ಕಡಿಮೆ ಅನುದಾನವನ್ನು ಬಿಡುಗಡೆ ಮಾಡಿರುವುದರಿಂದ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

13) **ಶ್ರೀ ಟಿ. ವೆಂಕಟರಮಣಯ್ಯ, ಶ್ರೀ ಕೃಷ್ಣ ಬೈರೇಗೌಡ ಮತ್ತು ಡಾ. ಕೆ. ಶ್ರೀನಿವಾಸಮೂರ್ತಿ ಅವರುಗಳು** – ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಅವೈಜ್ಞಾನಿಕವಾಗಿ ಘನತ್ಯಾಜ್ಯ ಸಂಸ್ಕರಣೆ ಮಾಡುತ್ತಿದ್ದು, ಇದರಿಂದಾಗಿ ವಾತಾವರಣ, ಜಲ ಕಲುಷಿತಗೊಂಡಿರುವುದರಿಂದ ಘನತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಥಗಿತಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಸಚಿವರ ಗಮನ ಸೆಳೆಯುವುದು.

14) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲ್‌ಪುರ ಪಟ್ಟಣದಲ್ಲಿ ಹೈಟೆಕ್ ಬಸ್ ನಿಲ್ದಾಣವನ್ನು ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

15) **ಶ್ರೀ ರಾಜೇಶ್ ನಾಯ್ಕ್ ಯು. ಅವರು** – ಉಡುಪಿ ಜಿಲ್ಲೆಯ ಯು.ಪಿ.ಸಿ.ಎಲ್. ನಿಂದ ಕೇರಳ ರಾಜ್ಯದ ಕಾಸರಗೂಡಿಗೆ ವಿದ್ಯುತ್ ಸರಬರಾಜು ಮಾಡಲು ವಿದ್ಯುತ್ ಲೈನ್ ಹಾಗೂ ಟವರ್ ಸ್ಥಾಪನೆ ಮಾಡುವುದರಿಂದ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

... 5/ ..

16) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ ಜಲಧಾರೆ ಯೋಜನೆಯಡಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

17) **ಶ್ರೀ ಪಿ.ಟಿ. ಪರಮೇಶ್ವರ್ ನಾಯಕ್ ಅವರು** – ರಾಜ್ಯದಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಹೆಚ್ಚಳ ಮಾಡುವ ಬಗ್ಗೆ ಹಾಗೂ ಉಪನ್ಯಾಸಕರ ನೇಮಕಾತಿ ಪ್ರಕ್ರಿಯೆಯಲ್ಲಿ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರ ಗಮನ ಸೆಳೆಯುವುದು.

18) **ಶ್ರೀ ಡಿ.ಕೆ. ಶಿವಕುಮಾರ್ ಅವರು** – ಬೆಂಗಳೂರು ನಗರದಲ್ಲಿ ರಸ್ತೆಗಳ ಅಗಲೀಕರಣ ಮತ್ತು ಇತರೆ ಅಭಿವೃದ್ಧಿಗೆ ಸ್ಥಳೀಯ ಸಂಸ್ಥೆಗಳಿಂದ ಪಡೆದುಕೊಂಡಿರುವ ಖಾಸಗಿ ಜಮೀನಿಗೆ ಟಿ.ಡಿ.ಆರ್. ಅಥವಾ ಪರಿಹಾರ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

19) **ಶ್ರೀ ಅಭಯ್ ಪಾಟೀಲ್ ಅವರು** – ವಿಶೇಷ ಪ್ಯಾಕೇಜ್ ಯೋಜನೆಯಡಿಯಲ್ಲಿ ಕೆ.ಹೆಚ್.ಡಿ.ಸಿ./ಕೆ.ಎಸ್.ಟಿ.ಐ.ಡಿ.ಸಿ., ಕಾವೇರಿ ಹ್ಯಾಂಡ್‌ಲೂಮ್ ನಿಗಮಗಳಿಗೆ ಅನುದಾನ ನೀಡಿ ವೃತ್ತಿಪರ ನೇಕಾರರಿಂದ ನೇರವಾಗಿ ಬಟ್ಟೆಗಳನ್ನು ಖರೀದಿಸುವ ಯೋಜನೆ ರೂಪಿಸುವ ಬಗ್ಗೆ ಹಾಗೂ ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ಹೈಟೆಕ್ ಟೆಕ್ಸ್‌ಟೈಲ್ ತರಬೇತಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

20) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ರಾಜ್ಯದಲ್ಲಿನ 2016ರ ಬ್ಯಾಚ್‌ನ ಸಿ.ಆರ್.ಪಿ./ಬಿ.ಆರ್.ಪಿ. ಇವರುಗಳಿಗೆ ಪ್ರಸ್ತುತ ವರ್ಗಾವಣೆ ಪಟ್ಟಿಯಲ್ಲಿ ಆಗಿರುವ ಅನ್ಯಾಯದ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm